## **ಕರ್ನಾಟಕ ಲೋಕಸೇವಾ ಆಯೋಗ**

ಸಂಖ್ಯೆ:ಪಿಎಸ್‌ಸಿ 1582 ಇ(1)/2024–25

ಲೋಕಸೇವಾ ಆಯೋಗದ ಕಛೇರಿ,
"ಉದ್ಯೋಗ ಸೌಧ",
ಬೆಂಗಳೂರು, ದಿನಾಂಕ: 29–08–2024.

**::ಪತ್ರಿಕಾ ಪ್ರಕಟಣೆ::**

ಆಯೋಗದ ಅಧಿಸೂಚನೆ ಸಂಖ್ಯೆ:ಪಿಎಸ್‌ಸಿ 509 ಇ(1)/2023–24, ದಿನಾಂಕ:26–02–2024ರಲ್ಲಿ ಅಧಿಸೂಚಿಸಲಾದ 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ:27–08–2024ರ ಮಂಗಳವಾರದಂದು ನಡೆಸಿದ ಪೂರ್ವಭಾವಿ ಪರೀಕ್ಷೆಯ ಪತ್ರಿಕೆ–I (ವಿಷಯ ಸಂಕೇತ–578) ಮತ್ತು ಪತ್ರಿಕೆ–II (ವಿಷಯ ಸಂಕೇತ–579)ರ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ **http://kpsc.kar.nic.in** ನಲ್ಲಿ ಪ್ರಕಟಿಸಲಾಗಿದೆ.

ಅಭ್ಯರ್ಥಿಗಳು ಸದರಿ ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಸೂಚನೆಗಳನ್ನು ಹಾಗೂ ನಮೂನೆಯ ಮಾದರಿಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುತ್ತದೆ. ಅಭ್ಯರ್ಥಿಗಳು ಕಡ್ಡಾಯವಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಸೂಚನೆಗಳನ್ವಯ ನಿಗದಿತ ನಮೂನೆಯಲ್ಲಿಯೇ ಆಕ್ಷೇಪಣೆಗಳನ್ನು ಸಲ್ಲಿಸತಕ್ಕದ್ದು.

ಆಕ್ಷೇಪಣೆಗಳನ್ನು ದಿನಾಂಕ:**04–09–2024ರ ಸಂಜೆ 5.30 ರೊಳಗಾಗಿ ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು–560001** ಇವರಿಗೆ ತಲುಪುವಂತೆ ಈ ವಿಳಾಸಕ್ಕೆ ಮಾತ್ರ ಕಳುಹಿಸತಕ್ಕದ್ದು. ಆಕ್ಷೇಪಣೆಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ:04–09–2024 ಸಂಜೆ:5.30 ಆಗಿದ್ದು, ಈ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳ ಆಕ್ಷೇಪಣೆಗಳು ಅಂಚೆಯ ಮೂಲಕ ಆಯೋಗಕ್ಕೆ ತಲುಪಲು ವಿಳಂಬವಾದಲ್ಲಿ ಕೆ.ಪಿ.ಎಸ್.ಸಿ.ಯು ಜವಾಬ್ದಾರಿಯಾಗಿರುವುದಿಲ್ಲವೆಂಬ ಮಾಹಿತಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಸಹಿ/–
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.